ಇ) ಚಿಕ್ಕೋಡಿ–ಸದಲಗಾ ಮತಕ್ಷೇತ್ರದಿಂದ ಈ ಕೆಳಕಂಡ ಯೋಜನೆಯಡಿಯಲ್ಲಿ ಸಾಲ ಸೌಲಭ್ಯಕ್ಕಾಗಿ ಪ್ರಸ್ತಾವನೆಯನ್ನು ಕೇಂದ್ರ ಕಛೇರಿಗೆ ಕಳುಹಿಸಿದ್ದು, ನಿಗಮದಿಂದ ನಿಗದಿಪಡಿಸಿರುವ ಗುರಿಗೆ ಅನುಗುಣವಾಗಿ ಸಾಲ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಕ್ರ ಸಂ.	ಯೋಜನೆಗಳು	ಚಿಕ್ಕೋಡಿ–ಸದಲಗಾ	
		ಭೌತಿಕ	ಆರ್ಥಿಕ
1	ಸ್ವಾವಲಂಬನ ಸಾಲ & ಸಹಾಯಧನ ಯೋಜನೆ	19	3,01.400
2	ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ **	261	37,47.700
3	ಶ್ರಮಶಕ್ತಿ ಸಾಲ ಯೋಜನೆ	9	1,35.00
	ಒಟ್ಟು	289	41,84.100

** ಅರಿವು ಸಾಲ ಯೋಜನೆಯಡಿಯಲ್ಲಿ ಜಿಲ್ಲಾವಾರು ಗುರಿ ನಿಗದಿಪಡಿಸಿರುವುದರಿಂದ ಬೆಳಗಾವಿ ಜಿಲ್ಲೆಯ ಒಟ್ಟಾರೆ ಸಾಧನೆಯನ್ನು ತೋರಿಸಲಾಗಿದೆ.

ಈ) ಉದ್ಭವಿಸುವುದಿಲ್ಲ

ಹಿಂದುಳಿದ ವರ್ಗದ ಜನಾಂಗಗಳ ಅಭಿವೃದ್ಧಿಗಾಗಿ ಒದಗಿಸಲಾದ ವಿಶೇಷ ಆರ್ಥಿಕ ನೆರವು :

515 ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹಿಂದುಳಿದ ವರ್ಗಗಳ 2ಎ ಪ್ರವರ್ಗದಲ್ಲಿ ಬರುವ ಎಷ್ಟು ಜನಾಂಗಗಳಿಗೆ ಅವುಗಳ ಅಭಿವೃದ್ಧಿಗಾಗಿ ವಿಶೇಷ ಆರ್ಥಿಕ ನೆರವನ್ನು ಒದಗಿಸಿಕೊಡಲಾಗಿದೆ: ಆ ಕುರಿತ ವಿವರಗಳೇನು?

ಆ) ವಿಶೇಷ ಆರ್ಥಿಕ ನೆರವನ್ನು ಪಡೆಯುವಲ್ಲಿ ಸಂಬಂಧಪಟ್ಟ ಜನಾಂಗದ ಉಪ ವರ್ಗಗಳಿಗೆ ಅನಾನುಕೂಲವಾಗಿರುವುದನ್ನು ಸರ್ಕಾರ ಗಮನಿಸಿದೆಯೇ? ಹಾಗಿದ್ದಲ್ಲಿ, ಸರ್ಕಾರದ ಕ್ರಮಗಳೇನು?

ಇ) ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಸದರಿ ಘೋಷಿತ ಜನಾಂಗಗಳಿಗೆ ಸಂಬಂಧಪಟ್ಟ ಎಲ್ಲಾ ಉಪ ವರ್ಗಗಳಿಗೂ ಸೌಲಭ್ಯವನ್ನು ವಿಸ್ತರಿಸುವ ದಿಶೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಆದೇಶಕ್ಕೆ ತಿದ್ದುಪಡಿ ಮಾಡಲಾಗುವುದೇ?

ಶ್ರೀ ಡಿ. ಸುಧಾಕರ (ಸಮಾಜ ಕಲ್ಯಾಣ ಸಚಿವರು) :

ಅ) "ವಿವಿಧ ಸಮುದಾಯಗಳ ಅಭಿವೃದ್ಧಿಯಡಿ" ಕ್ಷತ್ರಿಯ, ಕುಂಬಾರ, ಕಂಬಾರ, ಮಡಿವಾಳ, ದೇವಾಂಗ, ಕುರುಬ, ವಿಶ್ವಕರ್ಮ, ಬಿಲ್ಲವ ಮುಂತಾದ ಜನಾಂಗದವರಿಗೆ ಸಮುದಾಯ ಭವನ/ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕಾಗಿ ರೂ.5.00 ಲಕ್ಷಗಳ ಆರ್ಥಿಕ ನೆರವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಸದರಿ ಜನಾಂಗದ ವರಿಗೆ ಆರ್ಥಿಕ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಆ) ಮತ್ತು ಇ) ಇಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ ಕ್ರಮ ಜರುಗಿಸಲಾಗುತ್ತಿದೆ.

ಕ್ರಿಶ್ಚಿಯನ್ ಚರ್ಚ್‌ಗಳಿಂದ ಬರುವ ಆದಾಯ ಬಗ್ಗೆ

363 ಶ್ರೀಮತಿ ಮಲ್ಲಿಕಾ ಪ್ರಸಾದ್(ಪುತ್ತೂರು), ವಿ.ಸ ಸದಸ್ಯರು, : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಒಟ್ಟು ಇರುವ ಕ್ರಿಶ್ಚಿಯನ್ ಚರ್ಚುಗಳೆಷ್ಟು;

ಆ) ಕರ್ನಾಟಕ ರಾಜ್ಯದಲ್ಲಿರುವ ಕ್ರಿಶ್ಚಿಯನ್ ಚರ್ಚ್‌ಗಳಿಂದ ಸರ್ಕಾರಕ್ಕೆ ಕಳೆದ ಮೂರು ವರ್ಷಗಳಿಂದ ಬಂದ ಆದಾಯವೆಷ್ಟು;

ಇ) ಸರ್ಕಾರದ ಅಲ್ಪಸಂಖ್ಯಾತರ ಇಲಾಖೆ/ಇತರೆ ಇಲಾಖೆಯಿಂದ ಚರ್ಚುಗಳ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಿದ ಮೊತ್ತವೆಷ್ಟು?